# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 252

ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 06.03.2025

ಉತ್ತರಿಸುವ ಸಚಿವರು. : ಗೃಹ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ "ಡಿಜಿಟಲ್ ಅರೆಸ್ಟ್" ನಿಂದಾಗಿ, ಅಮಾಯಕರ ಬ್ಯಾಂಕ್ ಖಾತೆಯಿಂದ ಕೋಟಿ ಕೋಟಿ ರೂಪಾಯಿ ವಂಚನೆ ಆಗುತ್ತಿದ್ದು, ನೊಂದವರು ಮಾನಸಿಕವಾಗಿ ಕುಗ್ಗುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ "ಡಿಜಿಟಲ್ ಅರೆಸ್ಟ್" ವಂಚನೆಯ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಬಂದಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು; | ➢ ಡಿಜಿಟಲ್ ಅರೆಸ್ಟ್ ವಂಚನೆಯ ಪ್ರಕರಣಗಳ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br><br>➢ ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ್ ವಂಚನೆಯ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>➢ ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ್ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆ ಹಚ್ಚಿ, 268 ಫೇಸ್‌ಬುಕ್ ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 |

| | | |
|---|---|---|
| | | ಇನ್‌ಸ್ಟಾಗ್ರಾಂ ಖಾತೆಗಳು ಹಾಗೂ 61 ವಾಟ್ಸ್‌ಆಪ್ ಗುಂಪುಗಳನ್ನು ನಿಷ್ಕ್ರಿಯಗೊಳಿಸಲಾಗಿರುತ್ತದೆ.<br>➢ ಸೈಬರ್ ವಂಚಕರು ವಿಡಿಯೋ/ ವಾಟ್ಸ್‌ಆಪ್ ಮೂಲಕ ಸಾರ್ವಜನಿಕರಿಗೆ ಕರೆ ಮಾಡಿ ನೀವು ಮನಿಲ್ಯಾಂಡರಿಂಗ್ ಮತ್ತು ಮಾದಕ ವಸ್ತು ಗಾಂಜಾ ಅಕ್ರಮ ಸಾಗಾಣಿಕೆ ಪ್ರಕರಣಗಳಲ್ಲಿ ಭಾಗಿಯಾಗಿದ್ದೀರಿ ಅಂತಾ ಸಾರ್ವಜನಿಕರಿಗೆ ಭಯ ಪಡಿಸಿ ಅವರಿಂದ ಬ್ಯಾಂಕ್ ಖಾತೆ, ಆಧಾರ ಕಾರ್ಡ, ಇತ್ಯಾದಿ ದಾಖಲೆಗಳನ್ನು ಪರಿಶೀಲನೆ ನೆಪದಲ್ಲಿ ಪಡೆದುಕೊಂಡು ಅವರಿಂದ ಹಣ ಪಡೆದು ವಂಚನೆ ಮಾಡುತ್ತಿದ್ದು, ಈ ಬಗ್ಗೆ ಸಾರ್ವಜನಿಕರಿಗೆ ಸೈಬರ್ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>➢ 'ಡಿಜಿಟಲ್ ಅರೆಸ್ಟ್' ಕುರಿತು ಸೋಷಿಯಲ್ ಮೀಡಿಯಾದಲ್ಲಿ/ ದಿನಪತ್ರಿಗಳಲ್ಲಿ ಜಾಹೀರಾತು ನೀಡಿ ಸಾರ್ವಜನಿಕರು ಜಾಗೃತಿಯಿಂದ ಇರುವಂತೆ ಅರಿವು ಮೂಡಿಸಲಾಗುತ್ತಿದೆ.<br><br>➢ ಪ್ರಮುಖ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳ ಮುಖಾಂತರ ಕರೆಗಳು ಸ್ವೀಕರಿಸುವ ಮೊದಲು ಸೈಬರ್ ಅಪರಾಧಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.<br><br>➢ ಕೇಂದ್ರ ಸರ್ಕಾರವು ಸಾರ್ವಜನಿಕರ ಅನುಕೂಲಕ್ಕಾಗಿ National Cyber Crime Reporting Portal ಅನ್ನು ಪ್ರಾರಂಭಿಸಿದ್ದು, ಈ ಮೂಲಕ 1930 ಹಾಗೂ 112 ಸಹಾಯವಾಣಿಯನ್ನು ಸಾರ್ವಜನಿಕರಿಗೆ ಪ್ರಾರಂಭಿಸಲಾಗಿದ್ದು, ವಂಚನೆಗೆ ಒಳಗಾದಾಗ ಈ ಪೋರ್ಟಲ್ ಮೂಲಕ ಪ್ರಕರಣವನ್ನು ದಾಖಲಿಸಲು ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ. ಪೋರ್ಟಲ್ ನಿಂದ ರವಾನೆಯಾದಂತಹ ದೂರುಗಳನ್ನು ಸೆನ್ ಪೊಲೀಸ್ ಠಾಣೆಗಳಲ್ಲಿ ಪರಿಶೀಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 43 ಸೆನ್ ಪೊಲೀಸ್ ಠಾಣೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಸೇರಿದಂತೆ, 1063 ಪೊಲೀಸ್ ಠಾಣೆಗಳ ನುರಿತ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸಿಐಡಿ ಸೈಬರ್ Cyber Crime Training ಸೆಂಟರ್‌ನಲ್ಲಿ ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಈ ತರಬೇತಿ ಮೂಲಕ, ಡಿಜಿಟಲ್ ಅರೆಸ್ಟ್ ವಂಚನೆ ಪ್ರಕರಣಗಳ ಜೊತೆಗೆ ಎಲ್ಲಾ ರೀತಿಯ ಸೈಬರ್ ಅಪರಾಧ |

<table>
<tr><td></td><td></td><td>ಪ್ರಕರಣಗಳ ತನಿಖೆ ಹಾಗೂ ಅಪರಾಧ ತಡೆ ಬಗ್ಗೆ ಅಗತ್ಯ ಕಾರ್ಯಗಾರಗಳನ್ನು ಆಯೋಜಿಸಲಾಗುತ್ತಿರುತ್ತದೆ.</td></tr>
<tr><td>ಇ</td><td>ರಾಜ್ಯದಲ್ಲಿ ಈವರೆಗೆ ಈ ಸಂಬಂಧ ದಾಖಲಾದ ಒಟ್ಟು ಪ್ರಕರಣಗಳೆಷ್ಟು; ಸದರಿ ಪ್ರಕರಣಗಳಲ್ಲಿ ವಂಚಕರಿಂದ ಸಾರ್ವಜನಿಕರು ಕಳೆದುಕೊಂಡಿರುವ ಹಣದ ವಿವರ ನೀಡುವುದು;</td><td rowspan="2">ರಾಜ್ಯದಲ್ಲಿ 2023, 2024 & 2025 ಫೆಬ್ರುವರಿ ತಿಂಗಳ ಅಂತ್ಯದ ವರೆಗೆ ವರದಿಯಾಗಿರುವ "ಡಿಜಿಟಲ್ ಅರೆಸ್ಟ್" ವಂಚನೆಯ ಪ್ರಕರಣಗಳು ಮತ್ತು ವಂಚಕರಿಂದ ಸಾರ್ವಜನಿಕರು ಕಳೆದುಕೊಂಡಿರುವ ಹಣದ ವಿವರಗಳು ಈ ಕೆಳಕಂಡಂತಿದೆ:<br>
<table>
<tr><th>ವರ್ಷ</th><th>ದಾಖಲಾದ ಪ್ರಕರಣಗಳು</th><th>ವಂಚಕರಿಂದ ಸಾರ್ವಜನಿಕರು ಕಳೆದುಕೊಂಡ ಹಣದ ಮೊತ್ತ</th><th>ವಂಚಕರಿಂದ ಹಣ ವಶಪಡಿಸಿಕೊಳ್ಳಲಾದ ಪ್ರಕರಣಗಳ ಸಂಖ್ಯೆ</th></tr>
<tr><td>2023</td><td>67</td><td>79105284</td><td>16</td></tr>
<tr><td>2024</td><td>1066</td><td>1915542157</td><td>463</td></tr>
<tr><td>2025</td><td>95</td><td>201182786</td><td>20</td></tr>
</table></td></tr>
<tr><td>ಈ</td><td>ಎಷ್ಟು ಪ್ರಕರಣಗಳಲ್ಲಿ ಇದುವರೆಗೆ ವಂಚಕರಿಂದ ವಂಚನೆಯ ಹಣವನ್ನು ವಶಪಡಿಸಿಕೊಳ್ಳಲಾಗಿದೆ;</td></tr>
<tr><td>ಉ</td><td>"ಡಿಜಿಟಲ್ ಅರೆಸ್ಟ್" ವಂಚನೆಯನ್ನು ತಡೆಯುವ ಸಲುವಾಗಿ ಜಾಗೃತಿ ಮೂಡಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು?</td><td>'ಆ' ಪ್ರಶ್ನೆಯಲ್ಲಿ ಉತ್ತರಿಸಿರುವಂತೆ "ಡಿಜಿಟಲ್ ಅರೆಸ್ಟ್" ವಂಚನೆಯನ್ನು ತಡೆಯುವ ಸಲುವಾಗಿ ಜಾಗೃತಿ ಮೂಡಿಸಲು ಸರ್ಕಾರವು ಕ್ರಮಗಳನ್ನು ಕೈಗೊಂಡಿರುತ್ತದೆ.</td></tr>
</table>

ಸಂಖ್ಯೆ: ಹೆಚ್‌ಡಿ 06 ಪಿಸಿಕ್ಯೂ 2025

**(ಡಾ: ಜಿ.ಪರಮೇಶ್ವರ)**
ಗೃಹ ಸಚಿವರು